ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:2556/2022

ಚಾಸಾ:2 ಪ್ರಾಸಾ:2

ದಿನಾಂಕ: 21.04.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಭೋಜ ಪೂಜಾರಿ |
| ತಂದೆಯ ಹೆಸರು | : | ಐತು ಪೂಜಾರಿ |
| ವಯಸ್ಸು | : | 58 ವರ್ಷ |
| ಉದ್ಯೋಗ | : | ಚಾಲಕ |
| ವಾಸ ಸ್ಥಳ | : | ಬೇಳೂರು |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**<u>ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:</u>**

ನನಗೆ ಆರೋಪಿಯ ಪರಿಚಯ ಇಲ್ಲ. ನಾನು ಚಾಲಕನಾಗಿ ಕೆಲಸ ಮಾಡುತ್ತಿದ್ದೇನೆ. ಸುಮಾರು 2 ವರ್ಷಗಳ ಹಿಂದೆ ಮಧ್ಯಾಹ್ನದ ಸಮಯದಲ್ಲಿ ಬೇಳೂರಿನ ಅಂಗಡಿಯ ಬಳಿ ಅಪಘಾತವಾಗಿದೆ ಎಂದು ನನಗೆ ತಿಳಿದು ಬಂದಿರುತ್ತದೆ. ಯಾವುದೇ ವಾಹನವನ್ನು ನಾನು ನೋಡಿಲ್ಲ. ನಾನು ಪೊಲೀಸರಿಗೆ ಹೇಳಿಕೆ ಅಥವಾ ಮರುಹೇಳಿಕೆ ನೀಡಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ಧವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ವಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**<u>ವಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:</u>**

ದಿ:27.08.22 ರಂದು ಮಧ್ಯಾಹ್ನ 1 ಗಂಟೆ ಸಮಯಕ್ಕೆ ಬೇಳೂರು ಗ್ರಾಮದ ಮುಳ್ಳುಗುಡ್ಡೆಯಿಂದ ಸ್ವಲ್ಪ ಮುಂದೆ ಗಣಪತಿ ದೇವಸ್ಥಾನದ ಹತ್ತಿರ ನನ್ನ ಎದುರಿನಲ್ಲಿ ಪಲ್ಸರ್ ವಾಹನ ನಂ.ಕೆಎ-20/ಇವಿ-5282 ದ್ವಿಚಕ್ರ ವಾಹನವನ್ನು ಆರೋಪಿ ಹೆಂಡತಿ ಶಾಂಭವಿ ಹಾಗೂ ಮಗು ಶ್ರೇಣಿಕಾ

ಎಂಬುವವರೊಂದಿಗೆ ಅತೀವೇಗ ಹಾಗೂ ನಿರ್ಲಕ್ಷತನದಿಂದ ಚಲಾಯಿಸು ಬರುತ್ತಿದ್ದು, ರಸ್ತೆಯಲ್ಲಿದ್ದ ಹಾವು ನ್ನು ನೋಡಿ ಬ್ರೇಕ್ ಹಾಕಿದ ಪರಿಣಾಮ ಮೋಟಾರು ಸೈಕಲ್ ಸವಾರರೆಲ್ಲರೂ ರಸ್ತೆಗೆ ಬಿದಿದ್ದು, ಹಿಂಬದಿ ಸವಾರರಾದ ಶಾಂಭವಿಗೆ ತಲೆಗೆ, ಭುಜಕ್ಕೆ ತೀವ್ರ ಸ್ವರೂಪದ ಗಾಯಗಳಾಗಿದ್ದು, ಅವರನ್ನು ಆರೋಪಿ ಮತ್ತು ಮಗುವಿನೊಂದಿಗೆ ಎನ್. ಆರ್ ಆರ್ಚಾಯ ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದು, ಈ ವಿಚಾರವಾಗಿ ನಾನು ದಿಃ30.08.22 ರಂದು ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯ ಹೇಳಿಕೆಯನ್ನು ನಿಪಿ.8 ಎಂದು ಗುರುತಿಸಲಾಯಿತು.

ಶಾಂಭವಿರವರನ್ನು ಹೆಚ್ಚಿ ನ ಚಿಕಿತ್ಸೆಗಾಗಿ ಮಣಿಪಾಲದ ಕೆ ಎಮ್ ಸಿ ಆಸ್ಪತ್ರೆಗೆ ದಾಖಲಿಸಿದ್ದು,ಆಕೆ ಚಿಕಿತ್ಸೆ ಫಲಕಾರಿಯಾಗದೆ ದಿಃ02.09.2022 ರ ರಾತ್ರಿ 9.50 ಕ್ಕೆ ಮೃತಪಟ್ಟಿದ್ದು, ಈ ವಿಚಾರವಾಗಿ ನಾನು ದಿಃ03.09.22 ರಂದು ಪೊಲೀಸರು ಮರುಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯ ಮರು ಹೇಳಿಕೆಯನ್ನು ನಿಪಿ.9 ಎಂದು ಗುರುತಿಸಲಾಯಿತು.

ನಾನು ಅಪಘಾತದ ಪ್ರತ್ಯಕ್ಷದರ್ಶಿಯಾಗಿದ್ದು, ದೂರು ನೀಡಿ, ಆರೋಪಿಯ ಅತೀವೇಗ ಹಾಗೂ ನಿರ್ಲಕ್ಷತನದ ಚಾಲನೆಯಿಂದಲೇ ಅಪಘಾತವಾಗಿದೆ ಎಂದು ತಿಳಿದಿದ್ದರೂ ಸಹ ಆರೋಪಿ ನನ್ನ ಪರಿಚಯಸ್ಥನಾದ ಕಾರಣ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ವಾಟೀ ಸವಾಲುಃ ಆರೋಪಿತರ ಪರ ವಕೀಲರು ವಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**